**ಕರ್ನಾಟಕ ಸರ್ಕಾರ**

**ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/34/2020-21**

**ಕರ್ನಾಟಕ ಸರ್ಕಾರದ ಸಚಿವಾಲಯ**
**ವಿಕಾಸ ಸೌಧ, ಬೆಂಗಳೂರು**
**ದಿನಾಂಕ:29.03.2022**

**ಸುತ್ತೋಲೆ**

**ವಿಷಯ:** 12 -14 ವರ್ಷದ ಮಕ್ಕಳಿಗೆ ಶಾಲೆಗಳಲ್ಲಿ ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕಾಕರಣ ನಡೆಸುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿ. 16. 03.2022 ರಿಂದ ಭಾರತ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದಲ್ಲಿ 12 ರಿಂದ 14 ವರ್ಷದ ಮಕ್ಕಳಿಗೆ ಕೋರ್ಬಿವ್ಯಾಕ್ಸ್ ಲಸಿಕೆ ಬಳಸಿ ಕೋವಿಡ್-19 ಲಸಿಕಾಕರಣ ನಡೆಸಲಾಗುತ್ತಿದೆ. ರಾಜ್ಯವು 20.25 ಲಕ್ಷ ಗುರಿಯನ್ನು ಹೊಂದಿದ್ದು ಈವರೆಗೂ 5.36 ಲಕ್ಷ ಮಕ್ಕಳಿಗೆ ಲಸಿಕಾಕರಣವನ್ನು ಅರೋಗ್ಯ ಕೇಂದ್ರಗಳಲ್ಲಿ ನಡೆಸಲಾಗಿರುತ್ತದೆ. ಲಸಿಕಾರಣದ ವ್ಯಾಪ್ತಿಯನ್ನು ಹೆಚ್ಚಿಸಲು ಏಪ್ರಿಲ್ 1, 2022 ರಿಂದ ಶಾಲೆಗಳಲ್ಲಿಯೂ ಲಸಿಕಾ ಸತ್ರಗಳನ್ನು ಆಯೋಜಿಸಿ ಮಕ್ಕಳನ್ನು ಸಜ್ಜುಗೊಳಿಸಿ ಲಸಿಕಾಕರಣ ನಡೆಸಬೇಕಾಗಿದ್ದು, ಈಗಾಗಲೇ ಎಲ್ಲರ ಸಹಕಾರದಿಂದ 15 ರಿಂದ 17 ವರ್ಷದ ಮಕ್ಕಳ ಲಸಿಕಾಕರಣವನ್ನು ಶಾಲೆಗಳಲ್ಲಿ ಯಶಸ್ವಿಯಾಗಿ ನಡೆಸಲಾಗುತ್ತಿದೆ. ಅದರಂತೆಯೇ 12 ರಿಂದ 14 ವರ್ಷದ ಮಕ್ಕಳ ಲಸಿಕಾಕರಣವನ್ನು ಸುಗಮಗೊಳಿಸಲು ಮತ್ತು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಶಾಲೆಗಳಲ್ಲಿ ಲಸಿಕಾಕರಣವನ್ನು ನಡೆಸಲು ಕ್ರಮವಹಿಸುವುದು.

**ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ಕ್ರಮವಹಿಸಲು ತಿಳಿಸಿದೆ.**

- 28 ಮಾರ್ಚ್ 2010 ರಂದು ಅಥವಾ ಅದಕ್ಕೂ ಮುನ್ನ ಹುಟ್ಟಿರುವ ಎಲ್ಲಾ ಮಕ್ಕಳು ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕಾಕರಣಕ್ಕೆ ಅರ್ಹರಾಗಿರುತ್ತಾರೆ. ಅರ್ಥಾತ್ 12 ವರ್ಷ ಪೂರೈಸಿದ ಮಕ್ಕಳು ಮಾತ್ರ ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕೆ ಪಡೆಯಬಹುದಾಗಿರುತ್ತದೆ.
- ಅರ್ಹ ಪ್ರತಿ ಫಲಾನುಭವಿಗೆ ಎರಡು ಡೋಸ್ ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕೆಯನ್ನು ನೀಡಲಾಗುತ್ತದೆ. ಪ್ರತಿ ಡೋಸ್‌ಗೆ ಕೋರ್ಬಿವ್ಯಾಕ್ಸ್ ಲಸಿಕೆಯು 0.5 ಎಂ.ಎಲ್ ಆಗಿದ್ದು, ಚುಚ್ಚುಮದ್ದನ್ನು ಸ್ನಾಯುವಿನೊಳಗೆ ನೀಡಲಾಗುತ್ತದೆ. ಮೊದಲನೇ ಡೋಸ್ ಲಸಿಕೆ ಪಡೆದ 28 ದಿನಗಳ ನಂತರ ಎರಡನೇ ಡೋಸ್ ಲಸಿಕೆಯನ್ನು ನೀಡಲಾಗುತ್ತದೆ.
- ಅರ್ಹ ಮಕ್ಕಳಿಗೆ ಶಾಲೆಗಳಲ್ಲಿಯೇ ಲಸಿಕಾಕರಣ ಆಯೋಜಿಸಿ ಮುಂಚಿತವಾಗಿಯೇ ಲಸಿಕಾಕರಣದ ದಿನಾಂಕವನ್ನು ತಿಳಿಸುವುದು. ಶಾಲೆಯ ಅರ್ಹ ಮಕ್ಕಳ ಸಂಖ್ಯೆಗನುಗುಣವಾಗಿ ಸೂಕ್ಷ್ಮ ಕ್ರಿಯಾ ಯೋಜನೆ ಮತ್ತು ಅನುಷ್ಠಾನ ಕಾರ್ಯತಂತ್ರಗಳನ್ನು ಎರಡೂ ಇಲಾಖೆಗಳು ಜಂಟಿಯಾಗಿ ಆಯೋಜಿಸುವುದು.
- ಲಸಿಕಾಕರಣಕ್ಕೆ ಮುನ್ನ ಪೋಷಕರೊಂದಿಗೆ ಶಿಕ್ಷಕರು ಸಭೆಗಳನ್ನು ಆಯೋಜಿಸಿ (Parent teacher meeting) ಪೋಷಕರಿಗೆ ಕೋರ್ಬಿವಾಕ್ಸ್ ಲಸಿಕೆಯ ಕುರಿತು ಮಾಹಿತಿ ಮತ್ತು ಲಸಿಕಾಕರಣ ಮಹತ್ವದ ಕುರಿತು ಜಾಗೃತಿ ಮೂಡಿಸುವುದು.
- ಶಿಕ್ಷಣ ಇಲಾಖೆಯ ಅಧಿಕಾರಿಗಳು ಶಾಲೆಯಲ್ಲಿ ಓದುತ್ತಿರುವ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳ Line list ಅನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಒದಗಿಸುವುದು.
- ಕೋರ್ಬಿವ್ಯಾಕ್ಸ್ ಕೋವಿಡ್-19 ಲಸಿಕಾಕರಣಕ್ಕಾಗಿ ಶಾಲೆಗಳಲ್ಲಿ ಲಸಿಕಾ ಸತ್ರಗಳನ್ನು ಆಯೋಜಿಸಲು ಸಹಕರಿಸುವುದು.
- ಲಸಿಕಾ ಸತ್ರಗಳನ್ನು ಶಾಲೆಗಳಲ್ಲಿಯೇ ಆಯೋಜಿಸಲು 3 ಕೊಠಡಿಗಳು, ಅವಶ್ಯ ಸಿಬ್ಬಂದಿ, ನೀರು, ಕೈ ತೊಳೆಯುವ ಸೌಲಭ್ಯದಂತಹ ಮೂಲ ಸೌಕರ್ಯಗಳನ್ನು ಒದಗಿಸಿಕೊಡುವುದು. ಎಲ್ಲಾ ಹಂತಗಳಲ್ಲಿಯೂ

ಕೋವಿಡ್-19 ಮುಂಜಾಗ್ರತಾ ಕ್ರಮಗಳಾದ ಮಾಸ್ಕ್, ಸ್ಯಾನಿಟೈಸರ್ ಮತ್ತು 2 ಮೀಟರ್ ಅಂತರ ಇವುಗಳನ್ನು ಕಡ್ಡಾಯವಾಗಿ ಪಾಲಿಸುವುದು.

- ಲಸಿಕೆ ಪಡೆಯುವ ಮಕ್ಕಳ ತಂದೆ ತಾಯಿ/ಪೋಷಕರ ದೂರವಾಣಿ ಸಂಖ್ಯೆಯನ್ನು ಬಳಸಿ ಲಸಿಕಾಕರಣ ನಡೆಸಲಾಗುವುದು. ಪೋಷಕರ ದೂರವಾಣಿ ಸಂಖ್ಯೆ ಲಭ್ಯವಿಲ್ಲದಿದ್ದರೆ ಶಾಲಾ ಶಿಕ್ಷಕರ /ಮುಖ್ಯೋಪಾಧ್ಯಾಯರ ದೂರವಾಣಿ ಸಂಖ್ಯೆಯನ್ನು facilitator ಆಗಿ ಬಳಸಿ ಲಸಿಕಾಕರಣ ನಡೆಸಲಾಗುವುದು.
- ಶಾಲೆಯ ಗುರುತಿನ ಚೀಟಿ/ಆಧಾರ್ ಅನ್ನು ಫೋಟೋ ಐಡಿ ಆಗಿ ಬಳಸಲಾಗುವುದು.
- ಆನ್‌ಸೈಟ್ ಮೂಲಕ ಲಸಿಕಾಕರಣಕ್ಕಾಗಿ ನೋಂದಣಿ ಮಾಡಲಾಗುವುದು.
- DDPI, BEO, CRP ಮತ್ತು BRP ಗಳನ್ನು ಮಕ್ಕಳ ಲಸಿಕಾಕರಣ ನಡೆಯುವ ಎಲ್ಲಾ ಲಸಿಕಾ ಸತ್ರಗಳಿಗೆ ಮೇಲ್ವಿಚಾರಣೆಗಾಗಿ ನಿಯೋಜಿಸುವುದು.
- ಬಿಬಿಎಂಪಿ ವ್ಯಾಪ್ತಿಯ ಶಾಲೆಗಳ ಲಸಿಕಾಕರಣಕ್ಕಾಗಿ ಬೆಂಗಳೂರು ನಗರ ಜಿಲ್ಲೆಯ ಉತ್ತರ ಮತ್ತು ದಕ್ಷಿಣ ವಲಯಗಳ ಇಬ್ಬರು DDPI ಅಧಿಕಾರಿಗಳನ್ನು ಸಹಕರಿಸಲು ನಿಯೋಜಿಸುವುದು.
- ಶಾಲೆಗಳಲ್ಲಿ SDMC ಮತ್ತು ಗ್ರಾಮ ಪಂಚಾಯಿತಿ ಸದಸ್ಯರನ್ನೊಳಗೊಂಡ ಸಭೆ ನಡೆಸುವುದು ಮತ್ತು ಇವರುಗಳ ಸಹಯೋಗದೊಂದಿಗೆ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಕೋವಿಡ್-19 ಲಸಿಕಾಕರಣ ನಡೆಸುವಲ್ಲಿ ಆರೋಗ್ಯ ಇಲಾಖೆಯೊಂದಿಗೆ ಸಹಕರಿಸುವುದು.
- ಸಹ ಅಸ್ವಸ್ಥತೆ ಹೊಂದಿರುವ ಮಕ್ಕಳ ಲಸಿಕಾಕರಣಕ್ಕೆ ಪೋಷಕರ ಸಹಮತ ಪಡೆಯುವುದು ಮತ್ತು ಆರೋಗ್ಯ ಕೇಂದ್ರಗಳಲ್ಲಿಯೇ ವೈದ್ಯರ ಮೇಲ್ವಿಚಾರಣೆಯಲ್ಲಿ ಕೈಗೊಳ್ಳುವುದು.
- ಮಕ್ಕಳ ಲಸಿಕಾಕರಣದಲ್ಲಿ ಶಾಲಾ ಶಿಕ್ಷಕರು ಹಾಗೂ ಬೆಂಬಲ ಸಿಬ್ಬಂದಿ ಸಕ್ರಿಯವಾಗಿ ಪಾಲ್ಗೊಳ್ಳುವುದು.
- ಆರೋಗ್ಯ ಇಲಾಖೆಯ ಸಿಬ್ಬಂದಿ ಫಲಾನುಭವಿ ಮಕ್ಕಳ ಲಸಿಕಾಕರಣದ ವೈದ್ಯಕೀಯ ಅರ್ಹತೆ (Eligibility) ಬಗ್ಗೆ, ಲಸಿಕಾಕರಣ ಸಮಯದಲ್ಲಿ SOP ಗಳ ಕಡ್ಡಾಯ ಪಾಲಿಸುವಿಕೆ ಮತ್ತು ಲಸಿಕಾಕರಣದ ನಂತರ ಉಂಟಾಗಬಹುದಾದ ಯಾವುದೇ ಅಡ್ಡಪರಿಣಾಮಗಳ ನಿರ್ವಹಣೆಗಾಗಿ ಸಕಲ ಸಿದ್ಧತೆ ಮಾಡಿಕೊಂಡಿರುವುದನ್ನು ಖಚಿತಪಡಿಸಿಕೊಳ್ಳುವುದು.
- ಲಸಿಕಾಕರಣದಿಂದ ಬಿಟ್ಟುಹೋದ ಮಕ್ಕಳು ಕೋರ್ಬಿವ್ಯಾಕ್ಸ್ ಲಸಿಕೆಯನ್ನು ಸರ್ಕಾರಿ ಕೋವಿಡ್-19 ಲಸಿಕಾ ಕೇಂದ್ರಗಳಲ್ಲಿ ಮಾತ್ರ ಪಡೆಯಬಹುದು.
- ಎಲ್ಲಾ ಹಂತಗಳಲ್ಲಿ ಕೋವಿಡ್-19 ಲಸಿಕಾಕರಣದ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸುವುದು.

ಈ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ತಮ್ಮ ಸಹಕಾರ ಕೋರಲಾಗಿದೆ.

| | |
|---|---|
| ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು |
| ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಪ್ರಾಥಮಿಕ ಶಿಕ್ಷಣ ಇಲಾಖೆ |
| ಕರ್ನಾಟಕ ಸರ್ಕಾರ | ಕರ್ನಾಟಕ ಸರ್ಕಾರ |

ಇವರಿಗೆ,

1. ಮುಖ್ಯ ಆಯುಕ್ತರು, ಬಿಬಿಎಂಪಿ, ಬೆಂಗಳೂರು.
2. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ.
4. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.

ಸೂಕ್ತ ಕ್ರಮಕ್ಕಾಗಿ,

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.
3. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
4. ಎಲ್ಲಾ ಜಿಲ್ಲಾ ಆರ್ ಸಿ ಹೆಚ್ ಅಧಿಕಾರಿಗಳು.

ಪ್ರತಿಯನ್ನು ಮಾಹಿತಿಗಾಗಿ,

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
6. ಯೋಜನಾ ನಿರ್ದೇಶಕರು (ಆರ್ ಸಿ ಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
7. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
8. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
9. ಕಛೇರಿ ಪ್ರತಿ.